# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು,

ಬಿ.ಹೆಚ್. ರಸ್ತೆ, ತುಮಕೂರು. 572103 ದೂ.ಸಂ: 0816-2260220

ಸಂಖ್ಯೆ:ವಿವಿಕಾತು:2026-27:/102,    ದಿನಾಂಕ: 16.09.2026

:ದರಪಟ್ಟಿ ಆಹ್ವಾನ:

ವಿಷಯ: ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜಿನ ಸಂಕಲ್ಪ-2026 (ಕಾಲೇಜಿನ ವಿವಿಧ ಚಟುವಟಿಕೆಗಳ ಉದ್ಘಾಟನೆ) ಸಮಾರಂಭಕ್ಕೆ ಅವಶ್ಯಕ ವೇದಿಕೆ ಹಾಗೂ ಸಭಾಂಗಣ ಪರಿಕರಗಳನ್ನು ಸರಬರಾಜು ಮಾಡುವ ಸಂಬಂಧ ದರಪಟ್ಟಿ ಆಹ್ವಾನಿಸುತ್ತಿರುವ ಕುರಿತು.

* * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ತುಮಕೂರು ವಿಶ್ವವಿದ್ಯಾನಿಲಯದ ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜಿನ ಸಂಕಲ್ಪ-2026 ಸಮಾರಂಭಕ್ಕೆ ಅವಶ್ಯಕ ವೇದಿಕೆ ಹಾಗೂ ಸಭಾಂಗಣ ಪರಿಕರಗಳನ್ನು ಸರಬರಾಜು ಮಾಡುವ ಸಂಬಂಧ ಈ ಕೆಳಕಂಡ ಷರತ್ತು ಮತ್ತು ನಿಬಂದನೆಗಳೊಂದಿಗೆ ಅರ್ಹ ಏಜೆನ್ಸಿ/ಸಂಸ್ಥೆಗಳಿಂದ ದರಪಟ್ಟಿಯನ್ನು ಆಹ್ವಾನಿಸಲಾಗಿದೆ.

| ಕ್ರ. ಸಂ. | ಪರಿಕರಗಳ ವಿವರ | ಪ್ರಮಾಣ | ದರ |
|---|---|---|---|
| 1. | ಪ್ಲಾಸ್ಟಿಕ್ ಚೇರ್ ಗಳು | 800 | |
| 2. | ವೇದಿಕೆ ನೆಲಹಾಸು (ಕೆಂಪು) | 60’ x 40’ | |
| 3. | ಸೈಡ್ ವಾಲ್ | 80’ | |
| 4. | ಹಿಂಬದಿಯ ಸ್ಕ್ರೀನ್ (ನೀಲಿ) | 30’ x 60’ | |
| 5. | ಬ್ಯಾರಿಕೇಡ್ | 16 | |

**ಷರತ್ತು ಮತ್ತು ನಿಬಂಧನೆಗಳು:**

**1.** ದರಪಟ್ಟಿಯನ್ನು ಸಲ್ಲಿಸಲು ಕೊನೆಯ ದಿನಾಂಕ: **23.09.2026** ಅಪರಾಹ್ನ **04.00** ಗಂಟೆಯವರೆಗೆ ಸಲ್ಲಿಸಬಹುದಾಗಿದ್ದು ದರಪಟ್ಟಿಗಳನ್ನು ಮುದ್ದಾಂ ಅಥವಾ ಅಂಚೆಯ ಮೂಲಕ ಸಲ್ಲಿಸಬಹುದು. ಯಾವುದೇ ಅಂಚೆಯ ವಿಳಂಬಕ್ಕೆ ಅಥವಾ ಅಂಚೆಯು ತಲುಪದಿದ್ದಕ್ಕೆ ಕಾಲೇಜು ಜವಾಬ್ದಾರರಾಗುವುದಿಲ್ಲ.

**2.** ದರಪಟ್ಟಿಯನ್ನು ದಿನಾಂಕ: **24.09.2026** ರಂದು ಬೆಳಿಗ್ಗೆ **11.00** ಗಂಟೆಗೆ ತೆರೆಯಲಾಗುವುದು.

**3.** ದರಪಟ್ಟಿ ಸಲ್ಲಿಸುವ ಸಂಸ್ಥೆಯವರು ತಮ್ಮ ಸಂಸ್ಥೆಯ **GST** ಮತ್ತು **PAN** ದಾಖಲೆಗಳನ್ನು ದರಪಟ್ಟಿಯ ಜೊತೆಗೆ ಲಗತ್ತಿಸಬೇಕು.

**4.** ದರಪಟ್ಟಿಯ ಅವಧಿಯು ದರಪಟ್ಟಿಯನ್ನು ತೆರೆದ ದಿನಾಂಕದಿಂದ **60** ದಿನಗಳವರೆಗೆ ಚಾಲ್ತಿಯಲಿರುತ್ತದೆ.

**5.** ಸರಬರಾಜು ಮಾಡಲು ಯಾವುದೇ ಮುಂಗಡ ಹಣವನ್ನು ನೀಡಲಾಗುವುದಿಲ್ಲ.

**6.** ದರಪಟ್ಟಿಯಲ್ಲಿ ನಮೂದಿಸಿದ ದರಗಳು ತೆರಿಗೆ ಮತ್ತು ಕಾಮಗಾರಿ ವೆಚ್ಚವನ್ನು ಒಳಗೊಂಡಿರತಕ್ಕದ್ದು.

**7.** ದರಪಟ್ಟಿಯಲ್ಲಿ ನಮೂದಿಸಿರುವ ಸರಬರಾಜು ವಿಸ್ತರಿಸುವ ಅಥವಾ ಕಡಿಮೆಗೊಳಿಸುವ ಹಕ್ಕನ್ನು ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು ಕಾಯ್ದಿರಿಸಿಕೊಂಡಿರುತ್ತದೆ.

**8.** ದರಪಟ್ಟಿಗಳನ್ನು ಯಾವುದೇ ಕಾರಣ ನೀಡದೆ ಅಂಗೀಕರಿಸುವ ಅಥವಾ ತಿರಸ್ಕರಿಸುವ ಸಂಪೂರ್ಣ ಹಕ್ಕನ್ನು ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು ಕಾಯ್ದಿರಿಸಿಕೊಂಡಿದೆ.

**9.** ದರಪಟ್ಟಿಗಳ ಆಯ್ಕೆಯ ವಿಷಯದಲ್ಲಿ ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜಿನ ತೀರ್ಮಾನವೇ ಅಂತಿಮವಾಗಿರುತ್ತದೆ.

**10.** ಷರತ್ತು ಬದ್ಧ ದರಪಟ್ಟಿಗಳನ್ನು ಪರಿಗಣಿಸಲಾಗುವುದಿಲ್ಲ.

**11.** ಪ್ರತಿ ಸಂಸ್ಥೆಯವರು ಏಕೈಕ ದರಪಟ್ಟಿಯನ್ನು ಮಾತ್ರ ಸಲ್ಲಿಸತಕ್ಕದ್ದು.

**12.** ಕಾರ್ಯಾದೇಶದಲ್ಲಿ ನೀಡುವ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸಬೇಕು.

**13.** ಹೆಚ್ಚಿನ ವಿವರಗಳು ಅಥವಾ ಮಾಹಿತಿಯ ಅಗತ್ಯವಿದ್ದಲ್ಲಿ ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು, ತುಮಕೂರು ಇವರನ್ನು ಸಂಪರ್ಕಿಸಬಹುದು.

**ಪ್ರಾಂಶುಪಾಲರು**

ಪ್ರಾಂಶುಪಾಲರು
ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು
ತುಮಕೂರು-572103

**ಪ್ರತಿಗಳು:**

**1.** ಸೂಚನಾ ಫಲಕ, ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು, ತುಮಕೂರು.

**2.** ಡಾ. ಹರೀಶ್ ಕುಮಾರ್ ಕೆ, ಸಂಯೋಜಕರು, ವೆಬ್ ಸೈಟ್ ಸಮಿತಿ, ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು, ತುಮಕೂರು. - ವಿಜ್ಞಾನ ಕಾಲೇಜಿನ ವೆಬ್ ಸೈಟ್ ನಲ್ಲಿ ಪ್ರಕಟಿಸಲು ಸೂಚಿಸಿದೆ.

**3.** ಕಚೇರಿ ಪ್ರತಿ.